ಇ) ಬೋಧನಾ ಆಸ್ಪತ್ರೆಯಲ್ಲಿನ ಅತ್ಯಂತ ಹಿರಿಯ ಪ್ರಾಧ್ಯಾಪಕರನ್ನು ಆಯಾ ವಿಭಾಗದ ಪ್ರಾಧ್ಯಾಪಕರು ಮತ್ತು ಇಲಾಖಾ ಮುಖ್ಯಸ್ಥರ ಕರ್ತವ್ಯಗಳ ಜೊತೆಗೆ ಹೆಚ್ಚುವರಿಯಾಗಿ ವೈದ್ಯಕೀಯ ಅಧೀಕ್ಷಕರನ್ನಾಗಿ ಪದನಾಮೀಕರಿಸಲಾಗಿದೆ.

ಈ) ಭಾರತೀಯ ವೈದ್ಯಕೀಯ ಪರಿಷತ್ತಿನ ಮಾರ್ಗಸೂಚಿಗಳನ್ನು ಅನುಸರಿಸುವಂತೆ ಎಲ್ಲಾ ಸ್ವಾಯತ್ತ ಸಂಸ್ಥೆಗಳಿಗೆ ಸೂಚಿಸಲಾಗಿದೆ.

**ಡೀನ್/ ಪ್ರಾಂಶುಪಾಲರು ವಿಭಾಗ ಮುಖ್ಯಸ್ಥರ ನೇಮಕಾತಿ**

**389 (85) ಡಾ: ಹೆಚ್.ಸಿ. ಮಹದೇವಪ್ಪ (ಟಿ. ನರಸೀಪುರ) :** ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವೈದ್ಯಕೀಯ ಕಾಲೇಜುಗಳ ಡೀನ್/ಪ್ರಾಂಶುಪಾಲರು, ವೈದ್ಯಕೀಯ ಅಧೀಕ್ಷಕರು, ವಿಭಾಗಗಳ ಮುಖ್ಯಸ್ಥರುಗಳ ನೇಮಕಾತಿ ಸಂಬಂಧ ಭಾರತೀಯ ವೈದ್ಯಕೀಯ ಪರಿಷತ್ತು, 1998ರ ನಿಯಮಾವಳಿಗೆ 2009ನೇ ಸಾಲಿನಲ್ಲಿ ತಿದ್ದುಪಡಿ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಬೋಧಕ ಆಸ್ಪತ್ರೆಗಳಲ್ಲಿನ ಡೀನ್/ಪ್ರಾಂಶುಪಾಲರು, ವೈದ್ಯಕೀಯ ಅಧೀಕ್ಷಕರು ಹಾಗೂ ವಿಭಾಗಗಳ ಮುಖ್ಯಸ್ಥರ ಹುದ್ದೆಗಳನ್ನು ಮೇಲ್ಕಂಡ ಅಧಿನಿಯಮದ ನಿಯಮಗಳಿಗೆ ಅನುಸಾರ ನೇಮಕ ಮಾಡಲಾಗಿದೆಯೇ;

ಇ) ಇಲ್ಲದೇ, ಇದ್ದಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು?

**ಶ್ರೀ ರಾಮಚಂದ್ರ ಗೌಡ (ವೈದ್ಯಕೀಯ ಶಿಕ್ಷಣ ಸಚಿವರು) :**

ಅ) ಹೌದು.

ಆ) ಇಲ್ಲ.

ಇ) ಎಂಸಿಐ ನಿಯಂತ್ರಣಗಳನ್ನು ಅಳವಡಿಸಿಕೊಳ್ಳುವಂತೆ ಎಲ್ಲಾ ಸ್ವಾಯತ್ತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳಿಗೆ ಸಲಹೆ ನೀಡಲಾಗುತ್ತಿದೆ.